ಮೆ: ಕರ್ನಾಟಕ ಸ್ಟೇಟ್ ಮಿನರಲ್ಸ್ ಕಾರ್ಪೋರೇಶನ್ ಲಿಮಿಟೆಡ್, ರವರು ನಾಗಲಾಪೂರ ಮರಳು ಬ್ಲಾಕ್ ನಲ್ಲಿ (Block No.BLY-SB-14) ಸಾಮನ್ಯ ಮರಳು ಗಣಿಗಾರಿಕೆ ಮಾಡಲು ತುಂಗಭದ್ರಾ ನದಿ ಪಕ್ಕದ Sy.No.145(P), ನಾಗಲಾಪೂರ ಗ್ರಾಮ, ಸಿರುಗುಪ್ಪ ತಾಲ್ಲೂಕು, ಬಳ್ಳಾರಿ ಜಿಲ್ಲೆಯಲ್ಲಿ ಒಟ್ಟು 15.00 ಎಕರೆ ಪ್ರದೇಶದಲ್ಲಿ ವರ್ಷಕ್ಕೆ 41,946 ಟನ್‌ಗಳಷ್ಟು ಸಾಮನ್ಯ ಮರಳು ಗಣಿಗಾರಿಕೆಯನ್ನು ಅರೆ-ಯಾಂತ್ರಿಕೃತ ಪದ್ಧತಿಯ (Semi-mechanised method) ಪ್ರಕಾರ ಸ್ಥಾಪಿಸಲು ಪ್ರಸ್ತಾವನೆಯನ್ನು ಮಾಡುವ ಉದ್ದೇಶಕ್ಕಾಗಿ (ಯೋಜನಾ ಪ್ರದೇಶದಲ್ಲಿ) ದಿನಾಂಕ: 07-06-2022 ರಂದು ಮಧ್ಯಾಹ್ನ 03.00 ಗಂಟೆಗೆ ನಡೆದ ಪರಿಸರ ಸಾರ್ವಜನಿಕ ಸಭೆಯ ನಡುವಳಿಗಳು:-

| | | |
|---|---|---|
| ಪರಿಸರ ಕುರಿತಾದ ಸಾರ್ವಜನಿಕ ಆಲಿಕೆ ಸಭೆಯ ಸ್ಥಳ | | ಉದ್ದೇಶಿತ ಯೋಜನಾ ಸ್ಥಳ ಮೆ: ಕರ್ನಾಟಕ ಸ್ಟೇಟ್ ಮಿನರಲ್ಸ್ ಕಾರ್ಪೋರೇಶನ್ ಲಿಮಿಟೆಡ್ ರವರ ತುಂಗಭದ್ರಾ ನದಿ ಪಕ್ಕದ Sy.No.145(P), ನಾಗಲಾಪೂರ ಗ್ರಾಮ, ಸಿರುಗುಪ್ಪ ತಾಲ್ಲೂಕು, ಬಳ್ಳಾರಿ ಜಿಲ್ಲೆ. |
| ಹಾಜರಿದ್ದ ಪರಿಸರ ಸಾರ್ವಜನಿಕ ವಿಚಾರಣಾ ಸಮಿತಿಯ ಸದಸ್ಯರುಗಳ ವಿವರ | | **ಪದನಾಮ** |
| 1. | ಪಿ.ಎಸ್.ಮಂಜುನಾಥ, ಕ.ಆ.ಸೇ(ಹಿರಿಯ ಶ್ರೇಣಿ), ಅಪರ. ಜಿಲ್ಲಾಧಿಕಾರಿಗಳು ಹಾಗೂ ಅಪರ ಜಿಲ್ಲಾ ದಂಡಾಧಿಕಾರಿಗಳು, ಬಳ್ಳಾರಿ ಜಿಲ್ಲೆ | **ಅಧ್ಯಕ್ಷರು** |
| 2 | ಡಾ. ದೊಡ್ಡಶಾನಯ್ಯ, ಪರಿಸರ ಅಧಿಕಾರಿ & ಹಿರಿಯ ಪರಿಸರ ಅಧಿಕಾರಿಗಳು (ಪ್ರಭಾರ) ಕ.ರಾ.ಮಾ.ನಿ.ಮಂ.ಪ್ರಾದೇಶಿಕ ಕಛೇರಿ, ಬಳ್ಳಾರಿ | **ಸದಸ್ಯ ಸಮಾವೇಶಕರು** |

| | |
|---|---|
| **ಹಾಜರಿದ್ದ ಇತರ ಅಧಿಕಾರಿಗಳ ವಿವರ** | |
| 1 | ಶ್ರೀ ಹನುಮಂತಪ್ಪ ಹೆಚ್. ಸಹಾಯಕ ಪರಿಸರ ಅಧಿಕಾರಿ, ಕ.ರಾ.ಮಾ.ನಿ.ಮಂ.ಪ್ರಾಕ, ಬಳ್ಳಾರಿ |
| 2 | ಶ್ರೀ ಎಮ್ ಆರ್ ಮಂಜುನಾಥ, ತಹಶೀಲ್ದಾರರು, ಸಿರುಗುಪ್ಪ |
| 3 | ಶ್ರೀ ಮಹಮ್ಮದ್ ಯೂನುಸ್, ಪಿ.ಎಸ್.ಐ ಹಚ್ಚೊಳ್ಳಿ ಪೋಲಿಸ್ ಠಾಣೆ |
| 4 | ಶ್ರೀ ಪ್ರವೀಣ ಜೋಷಿ ಜಿಯಾಲಜಿಸ್ಟ್, ಗಣಿ ಮತ್ತು ಭೂ ವಿಜ್ಞಾನ ಇಲಾಖೆ, ಬಳ್ಳಾರಿ |
| ಮೆ: ಕರ್ನಾಟಕ ಸ್ಟೇಟ್ ಮಿನರಲ್ಸ್ ಕಾರ್ಪೋರೇಶನ್ ಲಿಮಿಟೆಡ್ ಉದ್ದಿಮೆಯ ವತಿಯಿಂದ ಹಾಜರಿದ್ದ ಪ್ರತಿನಿಧಿಗಳು. | |
| 1. | ಶ್ರೀ ಮಲ್ಲಿಕಾರ್ಜುನ ಸಾರಪುರ, ಜನರಲ್ ಮ್ಯಾನೇಜರ್ |
| 2. | ಶ್ರೀ ರಾಜಶೇಖರ ಬುಳ್ಳಾಪುರ, ಅಸಿಸ್ಟೆಂಟ್ ಜನರಲ್ ಮ್ಯಾನೇಜರ್ |
| 3. | ಶ್ರೀ ಕಬಿಲವಸ್ತು, ಕನ್‌ಸಲ್ಟೆಂಟ್ |
| 4. | ಶ್ರೀಮತಿ ಬಿನುತಾ ಪರಿಸರ ಅಧಿಕಾರಿ |
| 5 | ಶ್ರೀ ನಿರಂಜನ ಪ್ರಸಾದ, ಜಿಯಾಲಜಿಸ್ಟ್ |
| 6 | ಶ್ರೀ ತ್ರಯಂಬಕ ಶಾಸ್ತ್ರಿ, ಅಸಿಸ್ಟೆಂಟ್ ಮ್ಯಾನೇಜರ್ |

| | |
|---|---|
| 7 | ಶ್ರೀ ಸಿ.ನಾಗೇಶ, ಅಸಿಸ್ಟಂಟ್ ಮ್ಯಾನೇಜರ್ |
| 8 | ಶ್ರೀ ವಿನೀತಾ ಪೌಲ್ ಪರಿಸರ ಅಭಿಯಂತರರು |
| 9 | ಶ್ರೀ ಪೃಥ್ವಿರಾಜ್ ಪರಿಸರ ಅಭಿಯಂತರರು |
| 10 | ಶ್ರೀ ಟಿ.ಎ.ನಾಗರಾಜ ಕನ್‌ಸಲ್ಟೆಂಟ್, ಮೆ.ಸ್ನೇಹಾ ಹೈಟೆಕ್ ಪ್ರೋಡಕ್ಟ್ಸ್ |

1. ಪರಿಸರ ಸಾರ್ವಜನಿಕ ಆಲಿಕೆ ಸಭೆಗೆ ಭಾಗವಹಿಸಿದ ಅಧಿಕಾರಿಗಳ ಸಹಿ ಇರುವ ಹಾಜರಾತಿ ವಹಿಯ ಪ್ರತಿಯನ್ನು **ಅನುಬಂಧ–1** ರಲ್ಲಿ ಲಗತ್ತಿಸಲಾಗಿದೆ.
2. ಪರಿಸರ ಸಾರ್ವಜನಿಕ ಆಲಿಕೆ ಸಭೆಗೆ ಭಾಗವಹಿಸಿದ ಸಾರ್ವಜನಿಕರ ವಿಳಾಸ ಮತ್ತು ಸಹಿ ಇರುವ ಹಾಜರಾತಿ ವಹಿಯ ಪ್ರತಿಯನ್ನು **ಅನುಬಂಧ–2** ರಲ್ಲಿ ಲಗತ್ತಿಸಲಾಗಿದೆ.

**ಪೀಠಿಕೆ**

ಮೆ: ಕರ್ನಾಟಕ ಸ್ಟೇಟ್ ಮಿನರಲ್ಸ್ ಕಾರ್ಪೋರೇಶನ್ ಲಿಮಿಟೆಡ್, ರವರು ನಾಗಲಾಪೂರ ಮರಳು ಬ್ಲಾಕ್ ನಲ್ಲಿ (Block No.BLY-SB-14) ಸಾಮನ್ಯ ಮರಳು ಗಣಿಗಾರಿಕೆ ಮಾಡಲು ತುಂಗಭದ್ರಾ ನದಿ ಪಕ್ಕದ Sy.No.145(P) , ನಾಗಲಾಪೂರ ಗ್ರಾಮ, ಸಿರುಗುಪ್ಪ ತಾಲ್ಲೂಕು, ಬಳ್ಳಾರಿ ಜಿಲ್ಲೆಯಲ್ಲಿ ಒಟ್ಟು 15.00 ಎಕರೆ ಪ್ರದೇಶದಲ್ಲಿ ವರ್ಷಕ್ಕೆ 41,946 ಟನ್‌ಗಳಷ್ಟು ಸಾಮನ್ಯ ಮರಳು ಗಣಿಗಾರಿಕೆಯನ್ನು ಅರೆ–ಯಾಂತ್ರಿಕೃತ ಪದ್ದತಿಯ (Semi-mechanised method) ಪ್ರಕಾರ ಸ್ಥಾಪಿಸಲು ಪ್ರಸ್ತಾವನೆಯನ್ನು ಮಾಡಿರುತ್ತಾರೆ.

ಕೇಂದ್ರ ಸರ್ಕಾರದ ಪರಿಸರ, ಅರಣ್ಯ ಮತ್ತು ಹವಾಮಾನ ಬದಲಾವಣೆ ಮಂತ್ರಾಲಯ, ಇವರು ಪರಿಸರ (ಸಂರಕ್ಷಣೆ) ಕಾಯ್ದೆ 1986 ಅಡಿಯಲ್ಲಿ ದಿನಾಂಕ 14.09.2006 ರಲ್ಲಿ ಜಾರಿಗೊಳಿಸಿರುವ ಪರಿಸರ ಅಘಾತ ಅಧ್ಯಯನದ ಅಧಿಸೂಚನೆ (ತಿದ್ದುಪಡಿ ದಿನಾಂಕ 01.12.2009) ರನ್ವಯ ಯೋಜನಾ ಪ್ರವರ್ತಕರು ಸದರಿ ಯೋಜನೆಗೆ ಪರಿಸರ ವಿಮೋಚನಾ ಪತ್ರ ಪಡೆಯಬೇಕಾಗಿರುತ್ತದೆ.

ಸದರಿ ಉದ್ದೇಶಿತ ಯೋಜನೆಯು ಮೇಲೆ ತಿಳಿಸಿದ ಅಧಿಸೂಚನೆ ಅಡಿಯಲ್ಲಿ ಒಳಪಡುವುದರಿಂದ ಪರಿಸರ ವಿಮೋಚನಾ ಪತ್ರ ಪಡೆಯಬೇಕಾಗಿರುತ್ತದೆ.ಆ ಮೇರೆಗೆ ಯೋಜನಾ ಪ್ರವರ್ತಕರು ಪರಿಸರ ವಿಮೋಚನಾ ಪತ್ರವನ್ನು ಪಡೆಯಲು ರಾಜ್ಯ ಮಟ್ಟದ ಪರಿಸರ ಅಘಾತ ಅಧ್ಯಯನ ಪ್ರಾಧಿಕಾರ, ಕರ್ನಾಟಕ ಇವರು ಸದರಿ ಯೋಜನೆಯ ಟರ್ಮ್ಸ್ ಆಫ್ ರೆಫೆರೆನ್ಸ್ ಸಂಖ್ಯೆ : SEIAA 423 MIN 2021 ದಿನಾಂಕ : 06–12–2021 ರ ಷರತ್ತುಬದ್ಧ ನಿಬಂಧನೆಗಳ ಅನ್ವಯ ಪರಿಸರ ಸಾರ್ವಜನಿಕ ಆಲಿಕೆ ಸಭೆ ನಡೆಸುವುದು ಕಡ್ಡಾಯವಾಗಿರುತ್ತದೆ.

ಯೋಜನಾ ಪ್ರವರ್ತಕರು ಷರತ್ತುಬದ್ಧ ನಿಬಂಧನೆಗಳನ್ನು ಪಾಲಿಸುವ ಸಲುವಾಗಿ ಮೆ.ಸ್ನೇಹಾ ಹೈ ಟೆಕ್ ಪ್ರೋಡಕ್ಟ್ಸ್, ಬೆಂಗಳೂರು ಇವರು ತಯಾರಿಸಿದ ಕ್ಷಿಪ್ರ ಪರಿಸರ ಆಘಾತ ಅಂದಾಜು ಅಧ್ಯಯನ ವರದಿ ಮತ್ತು ಕಾರ್ಯಕಾರಿ ಸಾರಾಂಶವನ್ನು ಕನ್ನಡ ಮತ್ತು ಆಂಗ್ಲ ಭಾಷೆಗಳಲ್ಲಿ ಸಿದ್ಧಪಡಿಸಿ ಪರಿಸರ ಸಾರ್ವಜನಿಕ ಆಲಿಕೆ ಸಭೆಯನ್ನು ನಡೆಸಿಕೊಡಲು ಸದಸ್ಯ ಕಾರ್ಯದರ್ಶಿಗಳು, ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ, ಬೆಂಗಳೂರು ಇವರಿಗೆ ದಿನಾಂಕ 05–02–2022 ರಂದು ಮನವಿ ಸಲ್ಲಿಸಿರುತ್ತಾರೆ.

ಯೋಜನಾ ಪ್ರವರ್ತಕರ ಸದರಿ ಮನವಿಯ ಮೇರೆಗೆ, ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯ ವತಿಯಿಂದ ಜಿಲ್ಲಾಧಿಕಾರಿಗಳು, ಬಳ್ಳಾರಿ ಇವರಿಗೆ ಪರಿಸರ ಸಾರ್ವಜನಿಕ ಆಲಿಕಾ ಸಭೆ ನಡೆಸಲು ಸೂಕ್ತ ದಿನಾಂಕ ಹಾಗೂ ಸಮಯವನ್ನು ನೀಡಲು ದಿನಾಂಕ 01–04–2022 ಪತ್ರದ ಮೂಲಕ ಕೋರಲಾಗಿರುತ್ತದೆ.

ಜಿಲ್ಲಾಧಿಕಾರಿಗಳು, ಬಳ್ಳಾರಿ ಜಿಲ್ಲೆ, ಬಳ್ಳಾರಿ ರವರ ಆದೇಶದನ್ವಯ ದಿನಾಂಕ: 07-06-2022 ರಂದು ಮಧ್ಯಾಹ್ನ 03.00 ಗಂಟೆಗೆ ಯೋಜನಾ ಸ್ಥಳದಲ್ಲಿ ಪರಿಸರ ಸಾರ್ವಜನಿಕ ಆಲಿಕೆ ಸಭೆ ನಡೆಸಲು ಸಮ್ಮತಿ ಸೂಚಿಸಿರುತ್ತಾರೆ. ಈ ಸಭೆಗೆ ಪೂರಕವಾಗಿ ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯು ರಾಜ್ಯ ಮಟ್ಟದ ಪ್ರಮುಖ ದಿನ ಪತ್ರಿಕೆಗಳಾದ ಹೊಸ ದಿಗಂತ (ಕನ್ನಡ) ಹಾಗೂ ಟೈಮ್ಸ್ ಆಫ್ ಇಂಡಿಯಾ (ಆಂಗ್ಲ) ಗಳಲ್ಲಿ ದಿನಾಂಕ 07-05-2022 ರಂದು ಪತ್ರಿಕಾ ಪ್ರಕಟಣೆ ಬಳ್ಳಾರಿ ಜಿಲ್ಲೆಯ ಸ್ಥಳೀಯ ದಿನಪತ್ರಿಕೆಯಾದ "ಈ ನಮ್ಮ ಕನ್ನಡ ನಾಡು" ಪತ್ರಿಕೆಯಲ್ಲಿ ಸಹ ದಿನಾಂಕ: 08-05-2022 ರಂದು ಪರಿಸರ ಸಾರ್ವಜನಿಕ ಆಲಿಕೆ ಸಭೆ ಕುರಿತಾದ ಪ್ರಕಟಣೆಯನ್ನು ನೀಡಲಾಗಿರುತ್ತದೆ.(ಅನುಬಂಧ-3) ಈ ಯೋಜನೆಗೆ ಸಂಬಂಧಿಸಿದಂತೆ ಸಾರ್ವಜನಿಕರ ಅನಿಸಿಕೆ/ಆಕ್ಷೇಪಣೆ/ಸೂಚನೆ/ಸಲಹೆ/ಅಭಿಪ್ರಾಯಗಳನ್ನು ಲಿಖಿತವಾಗಿ 30 ದಿನಗಳ ಒಳಗೆ ಸಲ್ಲಿಸಲು ಕೋರಲಾಗಿತ್ತು.

ಸದರಿ ಯೋಜನೆಗೆ ಸಂಬಂಧಿಸಿದಂತೆ ಯೋಜನಾ ಪ್ರವರ್ತಕರು ಸಲ್ಲಿಸಿದ್ದ ಕ್ಷಿಪ್ರ ಪರಿಸರ ಆಘಾತ ಅಂದಾಜು ಅಧ್ಯಯನದ ವರದಿ ಮತ್ತು ಕಾರ್ಯಕಾರಿ ಸಾರಂಶದ ಕನ್ನಡ ಮತ್ತು ಆಂಗ್ಲ ಭಾಷೆಯ ಪ್ರತಿಗಳನ್ನು ಈ ಕೆಳಕಂಡ ಸ್ಥಳಗಳಲ್ಲಿ ಸಾರ್ವಜನಿಕರ ಪರಾಮರ್ಶೆಗೆ ಇಡಲಾಗಿತ್ತು.

- ಮಾನ್ಯ ಜಿಲ್ಲಾಧಿಕಾರಿಗಳ ಕಾರ್ಯಾಲಯ, ಬಳ್ಳಾರಿ,
- ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳ ಕಾರ್ಯಾಲಯ, ಜಿಲ್ಲಾ ಪಂಚಾಯತ್, ಬಳ್ಳಾರಿ.
- ಜಂಟಿ ನಿರ್ದೇಶಕರು, ಜಿಲ್ಲಾ ಕೈಗಾರಿಕಾ ಕೇಂದ್ರ, ಬಳ್ಳಾರಿ.
- ತಹಶೀಲ್ದಾರರ ಕಾರ್ಯಾಲಯ, ಸಿರುಗುಪ್ಪ, ಸಿರುಗುಪ್ಪ ತಾಲ್ಲೂಕು, ಬಳ್ಳಾರಿ ಜಿಲ್ಲೆ.
- ತಾಲ್ಲೂಕು ಪಂಚಾಯತಿ ಸಿರುಗುಪ್ಪ, ಸಿರುಗುಪ್ಪ ತಾಲ್ಲೂಕು, ಬಳ್ಳಾರಿ ಜಿಲ್ಲೆ.
- ಗ್ರಾಮ ಪಂಚಾಯತಿ ಕಾರ್ಯಾಲಯ, ಕುಡದರಹಾಳು, ಸಿರುಗುಪ್ಪ ತಾಲ್ಲೂಕು, ಬಳ್ಳಾರಿ ಜಿಲ್ಲೆ.
- ವಿಭಾಗಿಯ ಕಛೇರಿ, ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ, ಬಳ್ಳಾರಿ.
- ಪ್ರಾದೇಶಿಕ ಕಛೇರಿ, ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ, ಬಳ್ಳಾರಿ.
- ರಾಜ್ಯ ಮಟ್ಟದ ಪರಿಸರ ಅಘಾತ ಅಧ್ಯಯನ ಪ್ರಾಧಿಕಾರ, ಅರಣ್ಯ, ಜೀವಪರಿಸ್ಥಿತಿ ಮತ್ತು ಪರಿಸರ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
- ಸಹಾಯ ಕೇಂದ್ರ, ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ, ನೆಲ ಅಂತಸ್ತು, ನಂ. 49, ಪರಿಸರ ಭವನ, ಚರ್ಚ್ ಸ್ಟ್ರೀಟ್, ಬೆಂಗಳೂರು-560001

ಸದರಿ ಪರಿಸರ ಸಾರ್ವಜನಿಕ ಸಭೆಯ ಕುರಿತು ಮೇಲೆ ತಿಳಿಸಿದ ಎಲ್ಲಾ ಇಲಾಖೆಯವರಿಗೆ ಪರಿಸರ ಸಾರ್ವಜನಿಕ ಸಭೆ ನಡೆಯುತ್ತಿರುವ ಕುರಿತು ಹಾಗೂ ಪತ್ರಿಕಾ ಪ್ರಕಟಣೆ ಬಗ್ಗೆ ದಿನಾಂಕ: 11-05-2022 ರಂದು ಮಾಹಿತಿಯನ್ನು ನೀಡಲಾಗಿರುತ್ತದೆ.

ಯೋಜನಾ ಪ್ರದೇಶದ ಸುತ್ತಮುತ್ತಲಿನ ಸಾರ್ವಜನಿಕರಿಗೆ ಉದ್ದೇಶಿತ ವಿಸ್ತರಣಾ ಘಟಕದ ಕುರಿತು ಹಾಗು ಸಾರ್ವಜನಿಕ ಆಲಿಕಾ ಸಭೆ ನಡೆಯುವ ಬಗ್ಗೆ ಅರಿವು ಮೂಡಿಸುವ ಸಲುವಾಗಿ ಉದ್ದಿಮೆಯ ಸುತ್ತಮುತ್ತಲಿನ ಹಳ್ಳಿಗಳಾದ (ನಾಗಲಾಪೂರ, ಕುಡದರಹಾಳು, ಗಜಗಿನಹಾಳು) ಗಳಲ್ಲಿ ಕರ ಪತ್ರಗಳನ್ನು ಹಂಚಲಾಗಿದ್ದು ಮತ್ತು ಧ್ವನಿವರ್ಧಕಗಳ ಮೂಲಕವು ಸಹ ಪ್ರಚಾರವನ್ನು ದಿನಾಂಕ 04-06-2022 ರಂದು ಮಾಡಲಾಗಿರುತ್ತದೆ. (ಛಾಯಾ ಚಿತ್ರಗಳನ್ನು ಅನುಬಂಧ-4 ರಲ್ಲಿ ಲಗತ್ತಿಸಿದೆ)

ಮಾನ್ಯ ಜಿಲ್ಲಾಧಿಕಾರಿಗಳು, ಬಳ್ಳಾರಿ ರವರ ಅಧಿಕೃತ ಜ್ಞಾಪನಾ ಪತ್ರದ ದಿನಾಂಕ 06-06-2022 ರ ಅನ್ವಯ ಅಪರ ಜಿಲ್ಲಾಧಿಕಾರಿಗಳು ಹಾಗೂ ಅಪರ ಜಿಲ್ಲಾ ದಂಡಾಧಿಕಾರಿಗಳು, ಬಳ್ಳಾರಿ ರವರಿಗೆ ಅಧಿಕಾರ ನೀಡಿ ದಿನಾಂಕ : 07-06-2022 ರಂದು ನಡೆಯುವ ಪರಿಸರ ಆಲಿಕೆ ಸಭೆಯನ್ನು ನಡೆಸಲು ಆದೇಶಿಸಿರುತ್ತಾರೆ. ಸದರಿ ಜ್ಞಾಪನಾ ಪತ್ರದ ಪ್ರತಿಯನ್ನು (**ಅನುಬಂಧ-5** ರಂತೆ ಲಗತ್ತಿಸಿದೆ)

ಮೇಲೆ ತಿಳಿಸಿದ ಅಧಿಸೂಚನೆಯಲ್ಲಿನ ಎಲ್ಲಾ ವಿಧಿ-ವಿಧಾನಗಳನ್ನು ಕ್ರಮಬದ್ಧವಾಗಿ ನಿಯಮಾನುಸಾರ ಪಾಲಿಸಿ, ದಿನಾಂಕ 07-06-2022 ರಂದು ಮಧ್ಯಾಹ್ನ 03.00 ಗಂಟೆಗೆ ಪರಿಸರ ಸಾರ್ವಜನಿಕ ಆಲಿಕೆ ಸಭೆಯನ್ನು ಮಾನ್ಯ ಅಪರ ಜಿಲ್ಲಾಧಿಕಾರಿಗಳು ಹಾಗೂ ಅಪರ ಜಿಲ್ಲಾ ದಂಡಾಧಿಕಾರಿಗಳು, ಬಳ್ಳಾರಿ ಇವರ ಅಧ್ಯಕ್ಷತೆಯಲ್ಲಿ ಯೋಜನಾ ಸ್ಥಳವಾದ ತುಂಗಭದ್ರಾ ನದಿ ಪಕ್ಕದ Sy.No.145(P), ನಾಗಲಾಪೂರ ಗ್ರಾಮ, ಸಿರುಗುಪ್ಪ ತಾಲ್ಲೂಕು, ಬಳ್ಳಾರಿ ಜಿಲ್ಲೆ. ಜಿಲ್ಲೆಯಲ್ಲಿ ಪ್ರಾರಂಭಿಸಲಾಯಿತು.

**ಸಭೆಯ ನಡವಳಿಗಳು**

ಸದಸ್ಯ ಸಮಾವೇಷಕರು ಹಾಗೂ ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯ, ಬಳ್ಳಾರಿ ವಲಯ ಕಛೇರಿಯ ಹಿರಿಯ ಪರಿಸರ ಅಧಿಕಾರಿ (ಪ್ರಭಾರ) ಹಾಗೂ ಪರಿಸರ ಅಧಿಕಾರಿಗಳಾದ ಡಾ. ದೊಡ್ಡಶಾನಯ್ಯ ಅವರು ಶ್ರೀ ಪಿ.ಎಸ್.ಮಂಜುನಾಥ, ಕ.ಆ.ಸೇ(ಹಿರಿಯ ಶ್ರೇಣಿ), ಅಪರ ಜಿಲ್ಲಾಧಿಕಾರಿಗಳು ಹಾಗೂ ಅಪರ ಜಿಲ್ಲಾ ದಂಡಾಧಿಕಾರಿಗಳು, ಬಳ್ಳಾರಿ ಅವರಿಗೆ ಸ್ವಾಗತ ಕೋರಿದರು. ಮೆ.ಕರ್ನಾಟಕ ಸ್ಟೇಟ್ ಮಿನರಲ್ಸ್ ಕಾರ್ಪೋರೇಶನ್ ಲಿಮಿಟೆಡ್, ಕಂಪನಿಯ ಪ್ರತಿನಿಧಿಗಳಿಗೆ, ಅಧಿಕಾರಿಗಳಿಗೆ, ಎಲ್ಲಾ ಸಾರ್ವಜನಿಕರಿಗೆ, ಪತ್ರಕರ್ತರಿಗೆ ಹಾಗೂ ಇತರೆ ಇಲಾಖೆಯ ಅಧಿಕಾರಿಗಳಿಗೆ ಸ್ವಾಗತ ಕೋರಿದರು ಹಾಗೂ ಪರಿಸರ, ಅರಣ್ಯ ಮತ್ತು ಹವಾಮಾನ ಬದಲಾವಣೆ ಮಂತ್ರಾಲಯ, ಕೇಂದ್ರ ಸರ್ಕಾರ, ಇವರು ಪರಿಸರ(ಸಂರಕ್ಷಣೆ)ಕಾಯ್ದೆ, 1986 ರಡಿಯಲ್ಲಿ ದಿನಾಂಕ : 14-09-2006 ರಲ್ಲಿ ಜಾರಿಗೊಳಿಸಿರುವ ಪರಿಸರ ಅಘಾತ ಅಧ್ಯಯನದ ಅಧಿಸೂಚನೆ ಬಗ್ಗೆ ಸಂಕ್ಷಿಪ್ತವಾಗಿ ವಿವರಣೆ ನೀಡಿದರು. ಸದರಿ ಯೋಜನೆಗೆ ಸಂಬಂಧಪಟ್ಟ ಪ್ರಾಧೀಕಾರದಿಂದ ಪರಿಸರ ವಿಮೋಚನಾ ಪತ್ರ ಪಡೆಯಬೇಕಾಗಿರುವ ವಿಷಯವನ್ನು ಸಹ ಸಭೆಗೆ ತಿಳಿಸಿದರು. ಸಾರ್ವಜನಿಕ ಪರಿಸರ ಆಲಿಕೆ ಸಭೆಯ ಪೂರ್ವದಲ್ಲಿ ನಿಯಮಾನುಸಾರ ಕೈಗೊಂಡ ಕ್ರಮಗಳ ಬಗ್ಗೆ ವಿವರಣೆಯನ್ನು ನೀಡಿದರು ಹಾಗೂ ಸಾರ್ವಜನಿಕ ಆಲಿಕೆಯ ಸಭೆಯ ಅಧ್ಯಕ್ಷತೆಯನ್ನು ವಹಿಸುವಂತೆ ಮತ್ತು ಸಭೆಯನ್ನು ನಡೆಸಿಕೊಡುವಂತೆ ಮಾನ್ಯ ಅಪರ ಜಿಲ್ಲಾಧಿಕಾರಿಗಳನ್ನು ಕೋರಿದರು.

ಶ್ರೀ ಪಿ.ಎಸ್.ಮಂಜುನಾಥ, ಕ.ಆ.ಸೇ (ಹಿರಿಯ ಶ್ರೇಣಿ), ಅಪರ ಜಿಲ್ಲಾಧಿಕಾರಿಗಳು ಹಾಗೂ ಅಪರ ಜಿಲ್ಲಾ ದಂಡಾಧಿಕಾರಿಗಳು, ಬಳ್ಳಾರಿ ರವರು ಸಭೆಯನ್ನು ಉದ್ದೇಶಿಸಿ ಯೋಜನೆಗೆ ಪರಿಸರ ಸಾರ್ವಜನಿಕ ವಿಚಾರಣೆಯನ್ನು ನಡೆಸುವುದು ಕಡ್ಡಾಯವಾಗಿದೆ ಎಂದು ತಿಳಿಸಿದರು. ಪರಿಸರ ಅಘಾತ ಅಧ್ಯಯನ ಅಧಿಸೂಚನೆ ದಿನಾಂಕ: 14-09-2006 ರ ಬಗ್ಗೆ ವಿವರವಾದ ಮಾಹಿತಿಯನ್ನು ಸಭೆಯಲ್ಲಿದ್ದ ಸಾರ್ವಜನಿಕರಿಗೆ ತಿಳಿಸಿದರು ಹಾಗೂ ಪರಿಸರ ಸಾರ್ವಜನಿಕ ವಿಚಾರಣೆಯ ಅಗತ್ಯತೆಯನ್ನು ಸಂಕ್ಷಿಪ್ತವಾಗಿ ವಿವರಿಸಿದರು.

ಪ್ರಸ್ತಾವಿತ ಯೋಜನೆಯ ಪವರ್ ಪಾಯಿಂಟ್ ಪ್ರಸ್ತುತಿಯನ್ನು ನೀಡುವಂತೆ ಅವರು ಯೋಜನಾ ಪ್ರತಿಪಾದಕರಿಗೆ ಮಾಹಿತಿ ನೀಡಿದರು, ಅಲ್ಲಿ ವಿಚಾರಣೆಗೆ ಹಾಜರಿದ್ದ ಸಾರ್ವಜನಿಕರು ಪರಿಸರ ಸಮಸ್ಯೆಗಳ ಕುರಿತು ಉದ್ದೇಶಿತ ಯೋಜನೆಗೆ ತಮ್ಮ ಎಲ್ಲಾ ಅಭಿಪ್ರಾಯ/ಸಲಹೆ/ಪತ್ರಗಳನ್ನು ಯೋಜನೆಯ ಬಗ್ಗೆ ಲಿಖಿತ ಅಥವಾ ಮೌಖಿಕವಾಗಿ ಪ್ರಸ್ತುತಪಡಿಸುವಂತೆ ವಿನಂತಿಸಿಕೊಂಡರು. ಈ ನಡವಳಿಯು ಲಿಖಿತ ದಾಖಲೆ ಮತ್ತು ವಿಡಿಯೋಗ್ರಾಫಿ ಎರಡನ್ನು ಒಳಗೊಂಡಿದೆ ಎಂದು ಸಭೆಗೆ ತಿಳಿಸಿದರು.

ಮಾನ್ಯ ಅಪರ ಜಿಲ್ಲಾಧಿಕಾರಿಗಳ ಆದೇಶದಂತೆ ಮೆ.ಕರ್ನಾಟಕ ಸ್ಟೇಟ್ ಮಿನರಲ್ಸ್ ಕಾರ್ಪೋರೇಶನ್ ಲಿಮಿಟೆಡ್ ಕಂಪನಿ ಪರವಾಗಿ ಶ್ರೀ ನಾಗರಾಜ್ ಮೆ.ಸ್ನೇಹಾ ಹೈಟೆಕ್ ಪ್ರೋಡಕ್ಟ್ಸ್, ಬೆಂಗಳೂರು ರವರು ತಯಾರಿಸಿರುವ ಕ್ರಿಯಾತ್ಮಕ ಸಾರಾಂಶದಲ್ಲಿ ತಿಳಿಸಿರುವ ಕ್ರಮಗಳು, ಶಬ್ಧದ ಮಟ್ಟದ ಸುಧಾರಿತ ಕ್ರಮಗಳು, ನೀರಿನ ಗುಣಮಟ್ಟ ಸುಧಾರಿತ ಕ್ರಮಗಳು, ಗಾಳಿಯ ಗುಣಮಟ್ಟ ಸುಧಾರಿತ ಕ್ರಮಗಳು, ಮಣ್ಣಿನ ಗುಣಮಟ್ಟದ ಸುಧಾರಿತ ಕ್ರಮಗಳು, ಜಮೀನಿನ ಬಳಕೆ, ಸಸ್ಯೀಕರಣ ಪೋಟೊಗಳು, ಗಣಿ ಗುತ್ತಿಗೆ ಪ್ರದೇಶದೊಳಗಿನ ರಕ್ಷಣಾತ್ಮಕ ಕ್ರಮಗಳ ಪೋಟೊ, ಪರಿಸರ ರಕ್ಷಣೆಯ ಬಜೆಟ್ ಚಟುವಟಿಕೆಗಳನ್ನೊಳಗೊಂಡ ವಿವರಗಳನ್ನು ಪವರ್ ಪಾಯಿಂಟ್ ಮೂಲಕ ಸಭೆಗೆ ಮಂಡಿಸಿದರು ಮತ್ತು ಉದ್ದಿಮೆಯ ಸಿ.ಎಸ್.ಆರ್. ಅಡಿಯಲ್ಲಿ ತೆಗೆದುಕೊಂಡಿರುವ ವಿವಿಧ ಚಟುವಟಿಕೆಗಳನ್ನೊಳಗೊಂಡ ವಿವರಗಳನ್ನು ಪವರ್ ಪಾಯಿಂಟ್ ಮೂಲಕ ಸಭೆಗೆ ಮಂಡಿಸಿದರು.

ಸಭೆಯ ಅಧ್ಯಕ್ಷರು ಈ ಉದ್ದೇಶಿತ ಯೋಜನೆಯ ಬಗ್ಗೆ ಪರಿಸರ ಕುರಿತಾಗಿ ಯಾವುದೇಸಲಹೆ/ಅನಿಸಿಕೆ/ಅಭಿಪ್ರಾಯ/ಸೂಚನೆಗಳು ಯಾವುದಾದರೂ ಇದ್ದಲ್ಲಿ ಸಭೆಗೆ ಮಂಡಿಸುವಂತೆ ಸಭೆಯಲ್ಲಿ ನೆರೆದಿದ್ದ ಸಾರ್ವಜನಿಕರನ್ನು ಕೋರಿದರು.

ಆಮೇರೆಗೆ ಸಾರ್ವಜನಿಕರು ಯೋಜನೆಯ ಬಗ್ಗೆ ತಮ್ಮ ಸಲಹೆ/ಅನಿಸಿಕೆ/ಅಭಿಪ್ರಾಯ/ಸೂಚನೆಗಳನ್ನು ಈ ಕೆಳಕಂಡಂತೆ ಮಂಡಿಸಿದರು.

1. **ಶ್ರೀ ಚೆನ್ನಯ್ಯಸ್ವಾಮಿ ಗಜಿಗಿನಹಾಲ್ ಗ್ರಾಮ**– ರವರು ಮಾತನಾಡುತ್ತಾ, ರೈತರು ಹಗರಿನದಿಯಲ್ಲಿ ಪಂಪಸೆಟ್ ಮೂಲಕ ಬೆಳೆಯನ್ನು ಬೆಳೆಯುತ್ತಿದ್ದೇವೆ ಎಂದು ತಿಳಿಸಿದರು. ನೀರು ಬರುವುದು ಸಪ್ಟಂಬರ್ ನಿಂದ ಅಕ್ಟೋಬರ್ ತಿಂಗಳಲ್ಲಿ ಬರುತ್ತದೆ ಎಂದು ತಿಳಿಸಿದರು. ಈ ವರ್ಷ ಮಳೆ ಬಂದಿರುವುದರಿಂದ ನೀರು ಇದೆ. ಇಲ್ಲದಿದ್ದಲ್ಲಿ ಜುಲೈ ತಿಂಗಳುವರೆಗೆ ನೀರು ಇರುವುದಿಲ್ಲ ಎಂದು ತಿಳಿಸಿದರು. ಮರಳು ಗಣಿಗಾರಿಕೆ ಮಾಡುವುದರಿಂದ ಅಂತರ್ಜಲ ಕಡಿಮೆಯಾಗುತ್ತದೆ ಎಂದು ತಿಳಿಸಿದರು. ಮುಂದುವರೆದು ಮಾತನಾಡುತ್ತಾ ಒಂದು ಮೀಟರ್ ಆಳದಲ್ಲಿ ಮರಳು ಗಣಿಗಾರಿಕೆ ಮಾಡುತ್ತೇವೆ ಎಂದು ತಿಳಿಸಿ ಮೂರು ಮೀಟರ್ ಆಳದವರೆಗೆ ಮರಳು ಗಣಿಗಾರಿಕೆ ಮಾಡುತ್ತಾರೆ ಎಂದು ಆರೋಪಿಸಿದರು. ಅದಕ್ಕೆ ಉದಾರಹಣೆ ಕೂಡ ಇದೆ ಕಳೆದ ಸಲ ಅದೇ ರೀತಿ ಮಾಡಿದ್ದಾರೆ ಎಂದು ತಿಳಿಸಿದರು. ಮರಳು ಗಣಿಗಾರಿಕೆ ಮಾಡುವುದು ಬೇಡ ಎಂದು ತಿಳಿಸಿದರು. ಮರಳು ಗಣಿಗಾರಿಕೆ ಮಾಡುವುದರಿಂದ ನಮಗೆ ನಷ್ಟವಾಗುತ್ತದೆ ಇದರಿಂದ ನಮಗೆ ಸಮಸ್ಯೆ ಉಂಟಾಗುತ್ತದೆ ಎಂದು ತಿಳಿಸಿದರು. ಮರಳು ಗಣಿಗಾರಿಕೆ ನಿಲ್ಲಸಬೇಕು ದಯವಿಟ್ಟು ಮರಳು ಗಣಿಗಾರಿಕೆಗೆ ಅವಕಾಶ ಮಾಡಿಕೊಡಬಾರದೆಂದು ಮನವಿ ಮಾಡಿದರು.

2. **ಶ್ರೀ. ದೊಡ್ಡನಗೌಡ ಗಜಿಗಿನಹಾಲ್ ಗ್ರಾಮ** – ರವರು ಮಾತನಾಡುತ್ತಾ, ಮರಳು ಗಣಿಗಾರಿಕೆ ಮಾಡುವುದರಿಂದ ಕುಡಿಯುವ ನೀರಿಗೆ, ದನಕರುಗಳಿಗೆ, ಪ್ರಾಣಿ ಪಕ್ಷಿಗಳಿಗೆ ಬಹಳ ತೊಂದರೆಯಾಗುತ್ತದೆ ಎಂದು ತಿಳಿಸಿದರು. ಮುಖ್ಯವಾಗಿ ಕೃಷಿ ಭೂಮಿಗೆ ಯಾವುದೇ ರೀತಿಯಲ್ಲಿ ಉಪಯೋಗವಿಲ್ಲ ಎಂದು ತಿಳಿಸಿದರು. ನೀರು ಬೇಸಿಗೆ ಕಾಲದಲ್ಲಿ ಇರುವುದಿಲ್ಲ ಎಂದು ತಿಳಿಸಿದರು. ಕೇವಲ 2 ರಿಂದ 3 ತಿಂಗಳುಗಳಲ್ಲಿ ನೀರು ಇರುತ್ತದೆ ಎಂದು ತಿಳಿಸಿದರು. 2000 ರಿಂದ 3000 ಎಕರೆ ಭೂಮಿ ಸಂಪೂರ್ಣವಾಗಿ ಇದರಿಂದ ಅವಲಂಬಿತವಾಗಿದೆ ಬೇರೆ ಯಾವುದೇ ನೀರಿನ ಮೂಲವಿಲ್ಲ ಎಂದು ತಿಳಿಸಿದರು. ಹಗರಿ ನೀರು ಬರಬೇಕಾದರೆ ಕೆನಾಲ್ ನೀರು ಬಂದಾಗ ಸಿಪೇಜ್ ಮುಖಾಂತರ ನೀರು ಬರುತ್ತದೆ ಎಂದು ತಿಳಿಸಿದರು. ಮರಳು ಗಣಿಗಾರಿಕೆ ಮಾಡುವುದರಿಂದ ಸಂಪೂರ್ಣವಾಗಿ ತೊಂದರೆಯಾಗುತ್ತದೆ ಎಂದು ತಿಳಿಸಿದರು. ಈ ಮೊದಲು 10 ವರ್ಷದ ಮುಂಚೆ ನೀರು ಚೆನ್ನಾಗಿ ಇತ್ತು

ಆ ಸಮಯದಲ್ಲಿ ನವಿಲು ಬೇರೆ ಬೇರೆ ಪಕ್ಷಿಗಳು ಇದ್ದು ಅವುಗಳಿಗೆ ಕುಡಿಯುವ ನೀರಿನ ತೊಂದರೆಯಾಗಿ ಅವುಗಳ ಸಂತಂತಿ ನಶಿಶಿ ಹೋಗುತ್ತವೆ ಎಂದು ತಿಳಿಸಿದರು. ಯಾವುದೇ ಕಾರಣಕ್ಕೂ ಮರಳು ಗಣಿಗಾರಿಕೆ ಮಾಡುವುದಕ್ಕೆ ಅವಕಾಶ ಮಾಡಬಾರದೆಂದು ಗ್ರಾಮಸ್ಥರು ಪರವಾಗಿ ವಿನಂತಿ ಮಾಡಿದರು.

3. **ಶ್ರೀ ಅಂಬರೀಶ್ ಗೌಡ, ಬಾಗೇವಾಡಿ ಗ್ರಾಮ** – ರವರು ಮಾತನಾಡುತ್ತಾ, 5 ವರ್ಷದ ಹಿಂದೆ 1 ಮೀಟರ್ ಮರಳು ತೆಗೆಯುತ್ತೇವೆ ಎಂದು ಅದೆಷ್ಟು ಮೀಟರ್ ತೆಗೆದಿದ್ದಾರೆ ಎಂದು ಗೊತ್ತೆ ಆಗುವುದಿಲ್ಲ ಎಂದು ತಿಳಿಸಿದರು. ಇಲ್ಲಿ ಯಾರು ಸರ್ಕಾರಿ ಉದ್ಯೋಗದಲ್ಲಿರುವುದಿಲ್ಲ ಎಲ್ಲರಾ ರೈತಾಪಿ ವರ್ಗದವರಿದ್ದು ಕೃಷಿಯನ್ನು ನಂಬಿಕೊಂಡು ಬದುಕುತ್ತಿರುವುದಾಗಿ ತಿಳಿಸಿದರು. ಯಾವುದೇ ಕಾರಣಕ್ಕೂ ಮರಳು ಗಣಿಗಾರಿಕೆ ಬೇಡ ಎಂದು ತಿಳಿಸಿದರು.

4. **ಶ್ರೀ ತಿಮ್ಮನಗೌಡ ಗಜಿಗಿನಹಾಲ್ ಗ್ರಾಮ** – ರವರು ಮಾತನಾಡುತ್ತಾ, ಲಕ್ಷ ಲಕ್ಷ ರೂಪಾಯಿ ಸಾಲ ಮಾಡಿ ರೈತರು ಪೈಪಲೈನ್ ಮತ್ತು ಪಂಪಸೆಟ್ ಹಾಕಿಸಿದ್ದಾರೆ ಎಂದು ತಿಳಿಸಿದರು. ಗುತ್ತಿಗೆದಾರರು 1 ಅಡಿ ಎಂದು 6 ಅಡಿ ಆಳದವರೆಗೆ ಮರಳು ತೆಗೆಯುತ್ತಾರೆ. ಆ ಸಮಯದಲ್ಲಿ ಯಾರು ಕೇಳುವುದಕ್ಕೆ ಬರುವುದಿಲ್ಲ ಎಂದು ತಿಳಿಸಿದರು. ಈ ಹಿಂದೆ 106 ಲಾರಿಗಳನ್ನು ನಿಲ್ಲಿಸಿ ಬೆಳಗ್ಗೆಯವರಿಗೆ ಕಾದು ಜಿಲ್ಲಾಧಿಕಾರಿಗಳು ಸ್ಥಳಕ್ಕೆ ಬರುವವರೆಗೂ ಲಾರಿಗಳನ್ನು ತಡೆದು ಹೋರಾಟ ಮಾಡಿದಾಗ ಮರಳು ಗಣಿಕಾರೀಕೆ ನಿಲ್ಲಿಸಿದ್ದಾರೆ ಎಂದು ತಿಳಿಸಿದರು. ಮರಳು ಗಣಿಗಾರಿಕೆ ಮಾಡುವುದರಿಂದ ಬಹಳ ತೊಂದರೆಯಾಗುತ್ತದೆ ಎಂದು ತಿಳಿಸಿದರು. ಯಾವುದೇ ಕಾರಣಕ್ಕೂ ಮರಳು ಗಣಿಗಾರಿಕೆ ಮಾಡುವುದು ಬೇಡ ಎಂದು ತಿಳಿಸಿದರು.

5. **ಶ್ರೀ ಸೋಮನಗೌಡ, ನಾಗಲಾಪುರ ಗ್ರಾಮ**– ರವರು ಮಾತನಾಡುತ್ತಾ, ಅಂತರ್ಜಲ ಕಡಿಮೆಯಾಗುವುದರಿಂದ ಯಾವುದೇ ಕಾರಣಕ್ಕೂ ಮರಳು ಗಣಿಗಾರಿಕೆ ಮಾಡುವುದು ಬೇಡ ಎಂದು ಮನವಿ ಮಾಡಿದರು.
6. **ಶ್ರೀ ಅಂಬರೀಶ ಗೌಡ:– ಈ ಹಿಂದೆ ಲಾರಿಗಳನ್ನು ತಡೆದು ಮರಳು ಗಣಿಗಾರೀಕೆ ವಿರುದ್ದ ಹೋರಾಟ ಮಾಡಿರುವುದಾಗಿ ತಿಳಿಸಿದರು.**

7. **ಶ್ರೀ ಶಿವಪ್ರಸಾದ್, ಗಜಿಗಿನಹಾಲ್ ಗ್ರಾಮ**– ರವರು ಮಾತನಾಡುತ್ತಾ, ರೈತರಿಗೆ ನೀರಿನ ತೊಂದರೆಯಾದಾಗ ತಹಶೀಲ್ದಾರಾಗಲಿ, ರಾಜಕಾರಣಿಗಳಾಗಲಿ ಯಾರೂ ಯಾವುದೇ ಸಭೆಯನ್ನು ಮಾಡಿರುವುದಿಲ್ಲೈತರಿಗೆ ತೊಂದರೆಯಾದಗ ಯಾರು ನೆರವಿಗೆ ಬರುವುದಿಲ್ಲ ಎಂದು ತಿಳಿಸಿದರು. ಮರಳು ಗಣಿಗಾರಿಕೆ ಮಾಡುವುದರಿಂದ ಅಂತರ್ಜಲ ಕಡಿಮೆಯಾಗುತ್ತದೆ ಎಂದು ತಿಳಿಸಿದರು. ದಯವಿಟ್ಟು ಮರಳು ಗಣಿಗಾರಿಕೆಗೆ ಅನುಮತಿ ನೀಡಬಾರದೆಂದು ಮನವಿ ಮಾಡಿದರು. ಹಗರಿ ನದಿಯಿಂದಲೇ ರೈತರು ಜೀವನ ನಡೆಸುತ್ತಿದ್ದಾರೆ ಎಂದು ತಿಳಿಸಿದರು.
8. **ಶ್ರೀ ಅಮರೇಶ್‌ಗೌಡ ಗಜಿಗಿನಹಾಲ್ ಗ್ರಾಮ**– ರವರು ಮಾತನಾಡುತ್ತಾ, ಮರಳು ಗಣಿಗಾರಿಕೆ ಮಾಡುವುದರಿಂದ ಅಂತರ್ಜಲ ಕಡಿಮೆಯಾಗುತ್ತದೆ ಇದನ್ನು ಎಲ್ಲರೂ ವಿರೋಧ ಮಾಡುತ್ತೇವೆ ಎಂದು ತಿಳಿಸಿದರು. ಮರಳು ಗಣಿಗಾರಿಕೆಗೆ ಅನುಮತಿ ನೀಡಬಾರದೆಂದು ತಿಳಿಸಿದರು.

9. **ಶ್ರೀ ಅಶೋಕ್ ನಾಗಲಾಪುರ ಗ್ರಾಮ** –ರವರು ಮಾತನಾಡುತ್ತಾ, ಒಂದೆ ಊರಲ್ಲಿ ಜೆ.ಸಿ.ಬಿ.ಮೂಲಕ ಮರಳು ತೆಗೆಯುವುದರಿಂದ ನೀರು ನಿಲ್ಲದಂತೆ ಮಾಡಬೇಡಿ ಎಂದು ತಿಳಿಸಿದರು. ಮರಳು ಬೇಕಾದರೆ ತಹಶೀಲ್ದಾರರ ಕಛೇರಿಗೆ ಹೋಗಿ ಟ್ಯಾಕ್ಸ್ ಪಾವತಿ ಮಾಡಿ ಮರಳು ಪಡೆಯುತ್ತೇವೆ ಎಂದು ತಿಳಿಸಿದರು.

ಮನೆ ಕಟ್ಟುವುದಕ್ಕೆ ತೊಂದರೆಯಿದ ಮರಳು ಗಣಿಗಾರಿಕೆಗೆ ಅನುಮತಿ ನೀಡುವುದಾದರೆ ಹಗರಿ ನದಿ ಪಾತ್ರದಲ್ಲಿರುವ ಎಲ್ಲಾ ಸ್ಥಳಗಳಲ್ಲಿಯೂ ಅನುಮತಿ ಕೊಡಿ ಎಂದು ತಿಳಿಸಿದರು. ಲೇಬರ್‌ಗಳ ಸಹಾಯದಿಂದ ಮರಳು ತುಂಬುವುದರ ಮೂಲಕ ಟ್ರಾಕ್ಟರ್‌ಗಳ ಹಾಗೂ ಬಂಡಿಗಳು ಓಡಾಡುವುದಕ್ಕೆ ಸರಿಯಾದ ರಸ್ತೆಯನ್ನು ನಿರ್ಮಿಸುವಂತೆ ಮನವಿ ಮಾಡಿದರು.

ಕೊನೆಯಲ್ಲಿ ಸಾರ್ವಜನಿಕ ಆಲಿಕೆ ಸಭೆಯ ಅಧ್ಯಕ್ಷತೆಯನ್ನು ವಹಿಸಿದ್ದ ಶ್ರೀ ಪಿ.ಎಸ್.ಮಂಜುನಾಥ, ಕ.ಆ.ಸೇ (ಹಿರಿಯ ಶ್ರೇಣಿ), ಅಪರ ಜಿಲ್ಲಾಧಿಕಾರಿಗಳು ಹಾಗೂ ಅಪರ ಜಿಲ್ಲಾ ದಂಡಾಧಿಕಾರಿಗಳು, ಬಳ್ಳಾರಿ ರವರು ತಮ್ಮ ಅಧ್ಯಕ್ಷೀಯ ಮಾತುಗಳನ್ನಾಡುತ್ತ, ಸದರಿ ಸಭೆಯು ಪರಿಸರ ಸಾರ್ವಜನಿಕ ಸಭೆಯಾಗಿದ್ದು, ಇದರಲ್ಲಿ ಎಲ್ಲರಿಗೂ ಮಾತನಾಡಲು ಮುಕ್ತ ಅವಕಾಶವನ್ನು ಕಲ್ಪಿಸಲಾಗಿದೆ. ಹಾಗು ತಾವು ಮಾತನಾಡಿದ ಪರ/ವಿರೋಧ ಅಭಿಪ್ರಾಯಗಳನ್ನ ದಾಖಲಿಸಲಾಗಿದೆ. ಈ ಸಭೆಯಲ್ಲಿ ನಾವುಗಳು ಯಾವುದೇ ತಿರ್ಮಾನ ತೆಗೆದುಕೊಳ್ಳುವದಿಲ್ಲ, ಈ ಸಭೆಯ ಉದ್ದೇಶ ಸಾರ್ವಜನಿಕರ ಅಭಿಪ್ರಾಯ ಹಾಗೂ ಸಲ್ಲಿಸಿರುವ ಮೌಖಿಕ ಮತ್ತು ಲಿಖಿತ ಅಭಿಪ್ರಾಯಗಳನ್ನು ಸಂಗ್ರಹಿಸಿ, ಹಾಗೂ ತಾವುಗಳು ಸಲ್ಲಿಸಿರುವ ಮನವಿಗಳು, ಹೆಚ್ಚಿನ ಸಂಖ್ಯೆಯ ಲಿಖಿತ ಅಭಿಪ್ರಾಯಗಳು/ ಸಲಹೆಗಳು/ಆಕ್ಷೇಪಣೆಗಳನ್ನು ಸ್ವೀಕರಿಸಿದ್ದೇವೆ. ಅದನ್ನು ದಾಖಲಿಸಲಾಗುವುದು. ಈ ಸಭೆಯ ನಡವಳಿಯನ್ನು ಕನ್ನಡ ಮತ್ತು ಇಂಗ್ಲಿಷ್‌ನಲ್ಲಿ ದಾಖಲಿಸಿ, ಛಾಯಾಚಿತ್ರಗಳ (ಪ್ರತಿಯನ್ನು **ಅನುಬಂಧ-7** ರಲ್ಲಿ ಲಗತ್ತಿಸಲಾಗಿದೆ) ವಿಡಿಯೋ ಇರುವ ಸಿ.ಡಿ. ಗಳ (ಪ್ರತಿಯನ್ನು **ಅನುಬಂಧ-8** ರಲ್ಲಿ ಲಗತ್ತಿಸಲಾಗಿದೆ) ಇದನ್ನು ರಾಜ್ಯ ಮಟ್ಟದ ಪರಿಸರ ಅಘಾತ ಅಧ್ಯಯನ ಪ್ರಾಧಿಕಾರ, ಅರಣ್ಯ, ಜೀವಪರಿಸ್ಥಿತಿ ಮತ್ತು ಪರಿಸರ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು. ಇವರಿಗೆ ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ ಕೇಂದ್ರ ಕಛೇರಿ ಬೆಂಗಳೂರು ರವರ ಮುಖಾಂತರ ಕಳುಹಿಸಿಕೊಡಲಾಗುವುದು ಎಂದು ತಿಳಿಸಿದರು.

ಈ ಸಾರ್ವಜನಿಕ ಸಭೆಯಲ್ಲಿ ಪಾಲ್ಗೊಂಡ ಎಲ್ಲಾ ಸಾರ್ವಜನಿಕರಿಗೆ ಮತ್ತು ಸುತ್ತಮುತ್ತಲಿನ ಗ್ರಾಮಸ್ಥರಿಗೆ ಧನ್ಯವಾದಗಳನ್ನು ತಿಳಿಸುತ್ತಾ ಸಭೆಯನ್ನು ಮುಕ್ತಾಯಗೊಳಿಸಿದರು.

**ಡಾ.ದೊಡ್ಡಶಾನಯ್ಯ**
ಹಿರಿಯ ಪರಿಸರ ಅಧಿಕಾರಿ (ಪ್ರಭಾರ)
ಕ.ರಾ.ಮಾ.ನಿ.ಮಂ.ವಲಯ ಕಛೇರಿ, ಬಳ್ಳಾರಿ

**ಶ್ರೀ ಪಿ.ಎಸ್.ಮಂಜುನಾಥ, ಕ.ಆ.ಸೇ(ಹಿರಿಯ ಶ್ರೇಣಿ)**
ಅಪರ ಜಿಲ್ಲಾಧಿಕಾರಿಗಳು ಹಾಗೂ
ಬಳ್ಳಾರಿ ಅಪರ ಜಿಲ್ಲಾ ದಂಡಾಧಿಕಾರಿಗಳು, ಅಧ್ಯಕ್ಷರು
ಜಿಲ್ಲಾ ಪರಿಸರ ಸಾರ್ವಜನಿಕ ಆಲಿಕೆ

## ಅನುಬಂಧ

1. ಪರಿಸರ ಸಾರ್ವಜನಿಕ ಆಲಿಕೆ ಸಭೆಗೆ ಭಾಗವಹಿಸಿದ ಅಧಿಕಾರಿಗಳ ಸಹಿ ಇರುವ ಹಾಜರಾತಿ ವಹಿಯ ಪ್ರತಿಯನ್ನು **ಅನುಬಂಧ–1** ರಲ್ಲಿ ಲಗತ್ತಿಸಲಾಗಿದೆ.

2. ಪರಿಸರ ಸಾರ್ವಜನಿಕ ಆಲಿಕೆ ಸಭೆಗೆ ಭಾಗವಹಿಸಿದ ಸಾರ್ವಜನಿಕರ ವಿಳಾಸ ಮತ್ತು ಸಹಿ ಇರುವ ಹಾಜರಾತಿ ವಹಿಯ ಪ್ರತಿಯನ್ನು **ಅನುಬಂಧ–2** ರಲ್ಲಿ ಲಗತ್ತಿಸಲಾಗಿದೆ.

3. ರಾಜ್ಯ ಮಟ್ಟದ ಪ್ರಮುಖ ದಿನ ಪತ್ರಿಕೆಗಳಾದ ಹೊಸ ದಿಗಂತ (ಕನ್ನಡ) ಹಾಗೂ ಟೈಮ್ಸ್ ಆಫ್ ಇಂಡಿಯಾ (ಆಂಗ್ಲ) ಗಳಲ್ಲಿ ದಿನಾಂಕ 07–05–2022 ರಂದು ಪತ್ರಿಕಾ ಪ್ರಕಟಣೆ ಬಳ್ಳಾರಿ ಜಿಲ್ಲೆಯ ಸ್ಥಳೀಯ ದಿನಪತ್ರಿಕೆಯಾದ "ಈ ನಮ್ಮ ಕನ್ನಡ ನಾಡು" ಪತ್ರಿಕೆಯಲ್ಲಿ ದಿನಾಂಕ: 08–05–2022 ರಂದು ಪರಿಸರ ಸಾರ್ವಜನಿಕ ಆಲಿಕೆ ಸಭೆ ಕುರಿತಾದ ಪ್ರಕಟಣೆಯ ಪ್ರತಿಯನ್ನು **ಅನುಬಂಧ–3** ರಲ್ಲಿ ಲಗತ್ತಿಸಲಾಗಿದೆ.

4. ಪರಿಸರ ಸಾರ್ವಜನಿಕ ಆಲಿಕೆ ಸಭೆಯ ಪ್ರಚಾರಕ್ಕಾಗಿ ದಿನಾಂಕ 04–06–2022 ರಂದು ಕರಪತ್ರಗಳನ್ನು ವಿತರಿಸಲಾದ ಮತ್ತು ಧ್ವನಿವರ್ಧಕಗಳ ಮುಖೇನ ಯೋಜನಾ ಸ್ಥಳದ ಸುತ್ತಮುತ್ತಲ ಗ್ರಾಮಗಳಲ್ಲಿ ಸಾರ್ವಜನಿಕವಾಗಿ ಪ್ರಚಾರ ಮಾಡಲಾದ ಸಮಯದಲ್ಲಿ ತೆಗೆದುಕೊಂಡ ಛಾಯಾಚಿತ್ರಗಳ ಪ್ರತಿಯನ್ನು **ಅನುಬಂಧ–4** ರಲ್ಲಿ ಲಗತ್ತಿಸಲಾಗಿದೆ.

5. ಮಾನ್ಯ ಜಿಲ್ಲಾಧಿಕಾರಿಗಳು, ಬಳ್ಳಾರಿ ರವರ ಅಧಿಕೃತ ಜ್ಞಾಪನಾ ಪತ್ರದ ದಿನಾಂಕ 06–06–2022 ರ ಅನ್ವಯ ಅಪರ ಜಿಲ್ಲಾಧಿಕಾರಿಗಳು ಹಾಗೂ ಅಪರ ಜಿಲ್ಲಾ ದಂಡಾಧಿಕಾರಿಗಳು, ಬಳ್ಳಾರಿ ರವರಿಗೆ ಅಧಿಕಾರ ನೀಡಿ ದಿನಾಂಕ : 07–06–2022 ರಂದು ನಡೆಯುವ ಪರಿಸರ ಆಲಿಕೆ ಸಭೆಯನ್ನು ನಡೆಸಲು ಆದೇಶಿಸಿರುತ್ತಾರೆ. ಸದರಿ ಜ್ಞಾಪನಾ ಪತ್ರದ ಪ್ರತಿಯನ್ನು **ಅನುಬಂಧ–5** ರಂತೆ ಲಗತ್ತಿಸಿದೆ.

6. ಸಾರ್ವಜನಿಕರಿಂದ ಪ್ರಾದೇಶಿಕ ಕಛೇರಿ ಬಳ್ಳಾರಿಯಲ್ಲಿ ಸ್ವೀಕೃತಿಯಾದ ಒಟ್ಟು ೦೦ ಲಿಖಿತ ಹೇಳಿಕೆ/ ಆಕ್ಷೇಪಣೆಗಳು ಸ್ವೀಕೃತಿಯಾಗಿದ್ದು, ಪರಿಸರ ಸಾರ್ವಜನಿಕ ಸಭೆಯ ಸಮಯದಲ್ಲಿ ಒಟ್ಟು ೦೦ ಲಿಖಿತ ಹೇಳಿಕೆ/ ಆಕ್ಷೇಪಣೆಗಳುಸ್ವೀಕೃತಿಯಾಗಿರಯತ್ತವೆ ಅವುಗಳನ್ನು **ಅನುಬಂಧ–6** ರಲ್ಲಿ ಲಗತ್ತಿಸಲಾಗಿದೆ.

7. ಪರಿಸರ ಸಾರ್ವಜನಿಕ ಆಲಿಕೆ ಸಭೆಯ ಪ್ರಕ್ರಿಯೆಯ ಛಾಯಾಚಿತ್ರಗಳ ಪ್ರತಿಯನ್ನು **ಅನುಬಂಧ–7** ರಲ್ಲಿ ಲಗತ್ತಿಸಲಾಗಿದೆ.

8. ಪರಿಸರ ಸಾರ್ವಜನಿಕ ಆಲಿಕೆ ಸಭೆಯ ಆಡಿಯೋ ಮತ್ತು ವಿಡಿಯೋ ಇರುವ ಸಿ.ಡಿ. ಗಳ ಪ್ರತಿಯನ್ನು **ಅನುಬಂಧ–8** ರಲ್ಲಿ ಲಗತ್ತಿಸಲಾಗಿದೆ.

ಡಾ.ದೊಡ್ಡಶಾನಯ್ಯ
ಹಿರಿಯ ಪರಿಸರ ಅಧಿಕಾರಿ(ಪ್ರಭಾರ)
ಕ.ರಾ.ಮಾ.ನಿ.ಮಂ.ವಲಯ ಕಛೇರಿ, ಬಳ್ಳಾರಿ

ಶ್ರೀ ಪಿ.ಎಸ್.ಮಂಜುನಾಥ, ಕ.ಆ.ಸೇ(ಹಿರಿಯ ಶ್ರೇಣಿ)
ಅಪರ ಜಿಲ್ಲಾಧಿಕಾರಿಗಳು ಹಾಗೂ
ಬಳ್ಳಾರಿ ಅಪರ ಜಿಲ್ಲಾ ದಂಡಾಧಿಕಾರಿಗಳು, ಅಧ್ಯಕ್ಷರು
ಜಿಲ್ಲಾ ಪರಿಸರ ಸಾರ್ವಜನಿಕ ಆಲಿಕೆ